**All India Radio: Bangalore**
**Regional Bulletin In Kannada**
**17.04.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**17.04.2025 / 6.40 p.m.**
*****************

ಮುಖ್ಯಾಂಶಗಳು

೧. ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷಾ ವರದಿಯಲ್ಲಿ ದೊಡ್ಡ ಪ್ರಮಾದಗಳಿಲ್ಲ ಜಯಪ್ರಕಾಶ್ ಹೆಗಡೆ ಸ್ಪಷ್ಟನೆ

೨. ಬೆಲೆ ಏರಿಕೆ, ಆರೋಪ, ಪ್ರತ್ಯಾರೋಪದಲ್ಲಿ ನಿರತವಾದ ಕಾಂಗ್ರೆಸ್ -ಬಿಜೆಪಿ

೩. ರೈತರ ಅನುಕೂಲಕ್ಕಾಗಿ ಭತ್ತ, ಬಿಳಿ ಜೋಳ ಖರೀದಿಗೆ ಮುಂದಾದ ರಾಜ್ಯ ಸರ್ಕಾರ

೪. ಇಂದು ವಿಶ್ವ ಹಿಮೋಫಿಲಿಯಾ ದಿನ; ರಾಜ್ಯಾದ್ಯಂತ ಒಂದು ತಿಂಗಳು ಜಾಗೃತಿ ಅಭಿಯಾನ

*****************

ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷಾ ವರದಿ ಜಾರಿಗೊಳಿಸುವ ಸಂಬಂಧ ಅನುಸರಿಸಬಹುದಾದ ಮುಂದಿನ ಕ್ರಮ ಕುರಿತು ವಿಶೇಷ ಸಂಪುಟ ಸಭೆಯಲ್ಲಿ ಚರ್ಚೆ ಮುಂದುವರೆದಿದೆ.

ಈ ನಡುವೆ ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗಡೆ ಬೆಂಗಳೂರಿನಲ್ಲಿ ಸ್ಪಷ್ಟನೆ ನೀಡಿ ವರದಿಯಲ್ಲಿ ಯಾವುದೇ ದೊಡ್ಡ ಪ್ರಮಾದಗಳಿಲ್ಲ ಎಂದು ಸ್ಪಷ್ಟಪಡಿಸಿರುವುದಾಗಿ ವಾರ್ತಾ ಸಂಸ್ಥೆ ವರದಿ ಮಾಡಿದೆ.

ಸಮೀಕ್ಷಾ ವರದಿಯನ್ನು ಕಳೆದ ವಾರ ನಡೆದ ಸಂಪುಟ ಸಭೆಯಲ್ಲಿ ಮಂಡಿಸಲಾಗಿದ್ದು, ಅಧ್ಯಯನ ನಡೆಸಿ ಸ್ಪಷ್ಟ ಅಭಿಪ್ರಾಯ ಮಂಡಿಸುವಂತೆ ಸಚಿವರಿಗೆ ಸೂಚನೆ ನೀಡಲಾಗಿತ್ತು.

ಈ ನಡುವೆ ಕೇಂದ್ರ  ಸಚಿವ ಹೆಚ್.ಡಿ. ಕುಮಾರಸ್ವಾಮಿ ಈ ಕುರಿತು ಪ್ರತಿಕ್ರಿಯೆ ನೀಡಿದ್ದು, ಮುಖ್ಯಮಂತ್ರಿ ಸೇರಿದಂತೆ ಹಲವು ಸಚಿವರು ಇದು ಜಾತಿ ಸಮೀಕ್ಷೆಯಲ್ಲ ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಎಂದು ಹೇಳಿ ಜನರ ಗಮನವನ್ನು ಬೇರೆಡೆಗೆ ಸೆಳೆಯಲಾಗುತ್ತಿದೆ ಎಂದು ಕೇಂದ್ರ ಸಚಿವರು ಆರೋಪಿಸಿದ್ದಾರೆ.

*****************

ಗೊಬ್ಬರ, ಔಷಧಿ, ರಾಗಿ, ಗೋಧಿ, ಡಿಸೆಲ್, ಪೆಟ್ರೋಲ್ ಬೆಲೆ ಹೆಚ್ಚಳ ಮಾಡಿರುವ ಕೇಂದ್ರ ಸರ್ಕಾರ ಬಡವರು ಮತ್ತು ರೈತರ ವಿರೋಧಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಪಕ್ಷದ ವತಿಯಿಂದ ಏರ್ಪಡಿಸಿದ್ದ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗಾಗಿ ೫೬ ಸಾವಿರ ಕೋಟಿ  ರೂಪಾಯಿ ವಿನಿಯೋಗಿಸುತ್ತಿದೆ. ಆದರೂ ಇದನ್ನು ಸಹಿಸದ ವಿರೋಧ ಪಕ್ಷಗಳು ಸರ್ಕಾರದ ವಿರುದ್ಧ ಅಪಪ್ರಚಾರ ಮಾಡುತ್ತಿವೆ ಎಂದು ಅಸಮಾಧಾನ ಹೊರಹಾಕಿದರು.

ಹಾಲಿನ ಬೆಲೆ ೪ ರೂಪಾಯಿ ಹೆಚ್ಚಳ ಮಾಡಿದ್ದರೂ ಅದನ್ನು ರೈತರ ಉದ್ಧಾರಕ್ಕಾಗಿಯೇ ವಿನಿಯೋಗ ಮಾಡಲಾಗುತ್ತಿದೆ. ಹೆಚ್ಚಳ ದರ ಸರ್ಕಾರದ ಖಜಾನೆಗೆ ಬರುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

*****************

ರಾಜ್ಯ ಸರ್ಕಾರ ಬಡವರು ಮತ್ತು ದಲಿತರ ವಿರೋಧಿಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

ಬಾಗಲಕೋಟೆಯಲ್ಲಿಂದು ಪಕ್ಷದ ವತಿಯಿಂದ ಏರ್ಪಡಿಸಿದ್ದ ಜನಾಕ್ರೋಶ ಯಾತ್ರೆ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ನಿತ್ಯವು ಬೆಲೆ ಏರಿಕೆ ಮಾಡಿ, ಬಡವರ ಬದುಕನ್ನು

ಸಂಕಷ್ಟಕ್ಕೆ ದೂಡಿದೆ. ಪರಿಶಿಷ್ಟರ ಕಲ್ಯಾಣಕ್ಕೆ ಮೀಸಲಾಗಿದ್ದ ಹಣವನ್ನು ಬೇರೆ ಉದ್ದೇಶಕ್ಕೆ ಬಳಸಿಕೊಂಡು ಅನ್ಯಾಯ ಮಾಡುತ್ತಿದೆ ಎಂದು ದೂರಿದರು.

ಸಭೆಯನ್ನುದ್ದೇಶಿಸಿ ಬಿಜೆಪಿ ಹಿರಿಯ ನಾಯಕರಾದ ಜಗದೀಶ್ ಶೆಟ್ಟರ್, ಗೋವಿಂದ ಕಾರಜೋಳ, ವಿಧಾನಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ, ಸಂಸದ ಪಿ.ಸಿ.ಗದ್ದೀಗೌಡರ್ ಮೊದಲಾದವರು ಮಾತನಾಡಿದರು.

*****************

ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿ ಜಾರಿ ಸಂಬಂಧ ಸಚಿವ ಸಂಪುಟ ವಿವರವಾಗಿ ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳಲಿದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಕಲಬುರಗಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರದಿ ಬಗ್ಗೆ ಸಚಿವರು ಮತ್ತು ಸಾರ್ವಜನಿಕ ವಲಯದಲ್ಲಿ ವಿರೋಧ, ಗೊಂದಲ ವ್ಯಕ್ತವಾಗುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಎಲ್ಲರಿಗೂ ಅಭಿಪ್ರಾಯ ವ್ಯಕ್ತಪಡಿಸಲು ಅವಕಾಶವಿದೆ. ಅಂತಿಮವಾಗಿ ಸಚಿವ ಸಂಪುಟದಲ್ಲಿ ವಿಸ್ತಾರವಾಗಿ ಚರ್ಚೆ ಮಾಡಿ ವರದಿ ಜಾರಿ ಬಗ್ಗೆ ಸರ್ಕಾರವೇ ಅಂತಿಮ ತೀರ್ಮಾನಕ್ಕೆ ಬರಲಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

*****************

ಕೋಲಾರ ಜಿಲ್ಲೆಯ ಮಾಲೂರು ತಾಲೂಕಿನಲ್ಲಿ ಕಾರ್ಯಾಚರಣೆ ನಡೆಸುತ್ತಿರುವ ವಿವಿಧ ಕ್ರಷರ್‌ಗಳಿಗೆ ಉಪಲೋಕಾಯುಕ್ತ ಬಿ.ವೀರಪ್ಪ ಇಂದು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದರು ಮತ್ತು ಅಕ್ರಮ ಗಣಿಗಾರಿಕೆ ಕುರಿತು ಸ್ವಯಂ ದೂರು ದಾಖಲಿಸಿಕೊಂಡರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಕ್ರಮ ಗಣಿಗಾರಿಕೆ ಕುರಿತಂತೆ ಗಣಿ ಮತ್ತು ಭೂವಿಜ್ಞಾನ ಇಲಾಖೆ ಮತ್ತು ಪರಿಸರ ಇಲಾಖೆ ಅಧಿಕಾರಿಗಳಿಗೆ ವರದಿ ನೀಡಲು ಸೂಚಿಸಿರುವುದಾಗಿ ಉಪಲೋಕಾಯುಕ್ತ ಬಿ.ವೀರಪ್ಪ ತಿಳಿಸಿದರು.

ಧ್ವನಿ: ಬಿ.ವೀರಪ್ಪ

*****************

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಭತ್ತ ಮತ್ತು ಬಿಳಿ ಜೋಳ ಖರೀದಿಗೆ ರಾಜ್ಯ ಸರ್ಕಾರ ಮುಂದಾಗಿದೆ.

ದಾವಣಗೆರೆ ಜಿಲ್ಲೆಯಲ್ಲಿ ರೈತರಿಂದ ಭತ್ತ ಮತ್ತು ಬಿಳಿಜೋಳ ಖರೀದಿಗೆ ನೋಂದಣಿ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ಪ್ರಭಾರ ಜಿಲ್ಲಾಧಿಕಾರಿ ಡಾ.ಸುರೇಶ್ ಇಟ್ನಾಳ್ ತಿಳಿಸಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಮೂಲಕ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನಲ್ಲಿ ಭತ್ತ ಹಾಗೂ ಬಿಳಿ ಜೋಳವನ್ನು ರೈತರಿಂದ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲಾ ವ್ಯಾಪ್ತಿಯಲ್ಲಿನ ಬಿತ್ತನೆ ಪ್ರಮಾಣ ಆಧರಿಸಿ ಭತ್ತ ಪ್ರತಿ ಕ್ವಿಂಟಾಲ್‌ಗೆ ೨ ಸಾವಿರದ ೩೦೦ ರೂಪಾಯಿ ಹಾಗೂ ಹೈಬ್ರಿಡ್ ಜೋಳವನ್ನು ಪ್ರತಿ ಕ್ವಿಂಟಾಲ್‌ಗೆ ೩ ಸಾವಿರದ ೩೭೧ ರೂಪಾಯಿಯಂತೆ ಖರೀದಿಸಲಾಗುತ್ತಿದ್ದು, ಮೇ ೩೧ ರ ವರೆಗೆ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಹಾವೇರಿ ಜಿಲ್ಲೆಯಲ್ಲಿ ೬೦ ಸಾವಿರ ಕ್ವಿಂಟಾಲ್ ಜೋಳ ಖರೀದಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯ ಮಹಂತೇಶ ದಾನಮ್ಮನವರ್ ತಿಳಿಸಿದ್ದಾರೆ.

*****************

ಅಗ್ನಿಪಥ್ ಯೋಜನೆಯ ಅಗ್ನಿವೀರರ ೫ನೇ ತಂಡದ ತರಬೇತಿ ಕಾರ್ಯಕ್ರಮ ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಬೆಂಗಳೂರಿನಲ್ಲಿ ತರಬೇತಿ ಮುಗಿಸಿದ ೪೪೦ ಯೋಧರು ಭಾರತೀಯ ಸೇನೆಯ ಅವಧಿ ಆಯ್ಕೆಗಾಗಿ ವಿಶೇಷ ಪಡೆಯ ಘಟಕಕ್ಕೆ ತೆರಳುತ್ತಾರೆ.

ಈ ಸಂದರ್ಭದಲ್ಲಿ ಏರ್ ಮಾರ್ಷಲ್ ತೇಜ್ ಬೀರ್ ಸಿಂಗ್ ಮಾತನಾಡಿ, ಪ್ರಾಮಾಣಿಕತೆ, ನಿಯತ್ತು, ಸಾಹಸ ಎಂಬ ಸೇನಾ ನೀತಿಯನ್ನು ಅಗ್ನಿವೀರರು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

*****************

ಇಂದು ವಿಶ್ವ ಹಿಮೋಫಿಲಿಯಾ ದಿನ. ಇದರ ಅಂಗವಾಗಿ ರಾಜ್ಯದಲ್ಲಿ ಒಂದು ತಿಂಗಳ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಮಹಿಳೆಯರು ಮತ್ತು ಬಾಲಕಿಯರಲ್ಲಿಯೂ ರಕ್ತಸ್ರಾವ ಎಂಬುದು ಈ ವರ್ಷದ ಘೋಷ ವಾಕ್ಯವಾಗಿದೆ.ಈ ಕುರಿತು ಜಾಗೃತಿ ಮೂಡಿಸುವುದು ಹಾಗೂ ಮಹಿಳೆಯರ ಜೀವನ ಮಟ್ಟ ಸುಧಾರಿಸುವ ಉದ್ದೇಶ ಹೊಂದಲಾಗಿದೆ.

ಈ ನಿಟ್ಟಿನಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಹಾಗೂ ಇತರೆ ಸಂಘ ಸಂಸ್ಥೆಗಳು ನಿರಂತರ ಅಭಿಯಾನ ಕೈಗೊಳ್ಳುತ್ತಿದೆ.

*****************

ರಾಜ್ಯದ ಉತ್ತರ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಮಳೆಯಾಗಿದೆ. ಕರಾವಳಿಯಲ್ಲಿ ಒಣಹವೆ ಮುಂದುವರೆದಿದೆ.

ಹೊಸಕೋಟೆ, ಬೆಳ್ಳೂರು ೩, ಹುಣಸೂರು, ಮದ್ದೂರು, ಸರಗೂರು, ಕೃಷ್ಣರಾಜಪೇಟೆ, ಚೆನ್ನರಾಯಪಟ್ಟಣ ೨, ಭಾಗಮಂಡಲ, ಮೊಣಕಾಲ್ಮೂರು, ಹೊಸದುರ್ಗ, ತಿಪ್ಪಗೊಂಡನಹಳ್ಳಿಯಲ್ಲಿ ತಲಾ ೧ ಸೆಂಟಿಮೀಟರ್ ಮಳೆಯಾಗಿದೆ.

ಕಲಬುರಗಿಯಲ್ಲಿ ದಿನದ ಗರಿಷ್ಠ ಉಷ್ಣಾಂಶ ೪೦.೮ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

ಬೆಂಗಳೂರು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣ; ಆಗಾಗ ಹಗುರದಿಂದ ಸಾಧಾರಣ ಮಳೆ ಸಂಭವ. ಗರಿಷ್ಠ ೩೩, ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲು ಸಂಭವ.

*****************

ಜಾನುವಾರುಗಳ ಕಾಲುಬಾಯಿ ರೋಗ ನಿಯಂತ್ರಣಕ್ಕಾಗಿ ೭ನೇ ಸುತ್ತಿನ ಲಸಿಕಾ ಅಭಿಯಾನವನ್ನು ರಾಜ್ಯಾದ್ಯಂತ ಇದೇ ೨೧ ರಿಂದ ಜೂನ್ ೪ರವರೆಗೆ ಹಮ್ಮಿಕೊಳ್ಳಲು ಪಶು ಸಂಗೋಪನಾ ಇಲಾಖೆ ನಿರ್ಧರಿಸಿದೆ.

ಈಗಾಗಲೇ ಪಶು ವೈದ್ಯಾಧಿಕಾರಿಗಳು ಜಿಲ್ಲಾ ಮಟ್ಟದಲ್ಲಿ ಅಗತ್ಯ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ಅಭಿಯಾನ ಯಶಸ್ವಿಗೊಳಿಸಲು ಅಧಿಕಾರಿಗಳು ಕ್ರಮವಹಿಸಬೇಕೆಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೌಡ ಹೇಳಿದ್ದಾರೆ.

ಯಾದಗಿರಿಯಲ್ಲಿ ಅಭಿಯಾನದ ಪೂರ್ವ ಸಿದ್ಧತೆ ಕುರಿತು ಮಾತನಾಡಿದ ಅವರು, ರೈತರಿಗೆ ಆರ್ಥಿಕ ಸಂಕಷ್ಟ ಉಂಟು ಮಾಡುವ ಕಾಲುಬಾಯಿ ರೋಗ ನಿಯಂತ್ರಿಸಲು ಇಲಾಖೆ ಕೈಗೊಂಡ ಕ್ರಮಗಳಿಗೆ ರೈತರು ಸಹಕರಿಸಬೇಕು ಎಂದು ಹೇಳಿದರು.

******************

ಸಂಕ್ಷಿಪ್ತ ಸುದ್ದಿಗಳು

೧. ಪ್ರೊ. ಎಂ.ಗೋವಿಂದರಾವ್ ಅಧ್ಯಕ್ಷತೆಯ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಬೆಂಗಳೂರು ವಿಭಾಗ ಮಟ್ಟದ ಸಂವಾದ ಸಭೆ ಇದೇ ೨೮ ರಂದು ಚಿತ್ರದುರ್ಗದಲ್ಲಿ ನಡೆಯಲಿದೆ. ಈ ಸಭೆಯಲ್ಲಿ ತುಮಕೂರು, ದಾವಣಗೆರೆ, ಚಿತ್ರದುರ್ಗ, ಶಿವಮೊಗ್ಗ ಜಿಲ್ಲೆಯ ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸಲಿದ್ದಾರೆ.

೨. ಪ್ರವಾಸೋದ್ಯಮ ವ್ಯಾಪ್ತಿಗೆ ಬರುವ ಹೋಂ ಸ್ಟೇಗಳಲ್ಲಿ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೩. ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ೮ನೇ ವಾರ್ಷಿಕ ಕ್ರೀಡಾಕೂಟ ಗದಗದ ಕೆ.ಎಚ್.ಪಾಟೀಲ ಕ್ರೀಡಾಂಗಣದಲ್ಲಿಂದು ಜರುಗಿತು. ವಿಶ್ವವಿದ್ಯಾಲಯದ ಕುಲಸಚಿವ ಡಾ.ಸುರೇಶ್ ನಾಡಗೌಡ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

೪. ೭ನೇ ವೇತನ ಆಯೋಗದ ಸೌಲಭ್ಯವನ್ನು ಸ್ಥಳೀಯ ಸಂಸ್ಥೆ ನೌಕರರಿಗೂ ವಿಸ್ತರಿಸಬೇಕು ಎಂದು ಶಿವಮೊಗ್ಗ ಮಹಾನಗರ ಪಾಲಿಕೆ ನೌಕರರು ಪ್ರತಿಭಟನೆ ನಡೆಸಿದರು.

೫.	ಬೇಸಿಗೆ ಸಂದರ್ಭದಲ್ಲಿ ಕಾರ್ಮಿಕರು ಹೆಚ್ಚು ಆಯಾಸ, ದೈಹಿಕ ತೊಂದರೆಗೆ ಒಳಗಾಗದಂತೆ ಕೆಲಸ ಮಾಡುವ ಜಾಗದಲ್ಲಿ ಸುರಕ್ಷಿತಾ ಕ್ರಮಗಳಿಗೆ ಆದ್ಯತೆ ನೀಡಬೇಕು ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಂ.ಪಿ.ದೊಡ್ಡಮನಿ ವಿಜಯನಗರದಲ್ಲಿ ಇಂದು ಹೇಳಿದ್ದಾರೆ.

೬.	ಕಾಂತರಾಜು ವರದಿಯಿಂದ ಈಡಿಗ ಸಮುದಾಯಕ್ಕೆ ನ್ಯಾಯ ದೊರಕಿಲ್ಲ ಎಂದು ಈಡಿಗ ಸಮಾಜದ ಮುಖಂಡ ಡಾ.ಜ್ಞಾನೇಶ್ ಆರೋಪಿಸಿದ್ದಾರೆ.

೭.	ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಟರ್ಮಿನಲ್-೨ರಲ್ಲಿ ಕಲಾಸಕ್ತರು ಮತ್ತು ಸಾರ್ವಜನಿಕರಿಗಾಗಿ ಆರ್ಟ್ ಪಾರ್ಕ್ ಸ್ಥಾಪಿಸಿದ್ದು, ಕಲಾಪ್ರಿಯರ ಗಮನ ಸೆಳೆಯುತ್ತಿದೆ ಎಂದು ವಿಮಾನ ನಿಲ್ದಾಣದ ಕಾರ್ಯನಿರ್ವಾಹಕ ಅಧಿಕಾರಿ ಹರಿ ಮಾರಾರ್ ತಿಳಿಸಿದ್ದಾರೆ.

*********ಮುಕ್ತಾಯ*********